2. ಹಾಗಿದ್ದಲ್ಲಿ ಎಲ್ಲಿ ಮತ್ತು ಯಾರ ನೆರವಿನಿಂದ ;
3. ಸರ್ಕಾರವು ಪ್ರಾರಂಭಿಸಲು ಉದ್ದೇಶಿಸಿರುವ ಹೊಸ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಮುಂದಿನ ವಿದ್ಯಾಭ್ಯಾಸದ ವರ್ಷದಲ್ಲಿ ಪ್ರಾರಂಭಿಸುವುದೇ ?

ಶ್ರೀ ಎ.ಎಸ್. ನಾಡಗೌಡ (ಕಾರ್ಮಿಕ ಸಚಿವರು) –

1. ಹೌದು
2. ಮೂರು ಮಹಿಳಾ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಗುಂಡ್ಲುಪೇಟೆ, ನಲವತ್‌ವಾಡ್ ಮತ್ತು ಗದಗ್‌ನಲ್ಲಿ ವಿಶ್ವಬ್ಯಾಂಕ್ ಯೋಜನೆಯಡಿ ಕೇಂದ್ರದ ನೆರವಿನೊಂದಿಗೆ ಪ್ರಾರಂಭಿಸಲಾಗಿದೆ.
3. ಮುಂದಿನ ಅಂದರೆ 1992–93ನೇ ಸಾಲಿನಲ್ಲಿ ವಿಶ್ವಬ್ಯಾಂಕ್ ಯೋಜನೆಯಡಿ ಈ ಕೆಳಕಂಡ ನಾಲ್ಕು ಸ್ಥಳಗಳಲ್ಲಿ ಮಹಿಳಾ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸಲು ಸರ್ಕಾರವು ಉದ್ದೇಶಿಸಿದೆ.

    1. ತಿಪಟೂರು
    2. ಕೋಲಾರ
    3. ಪುತ್ತೂರು
    4. ಬೆಂಗಳೂರು ನಗರ.

ಶ್ರೀ ಓ. ಚಿನ್ನಪ್ಪರೆಡ್ಡಿ ಆಯೋಗದ ವರದಿ ಜಾರಿ.

764. ಶ್ರೀ ಬಸವರಾಜರಾಯರೆಡ್ಡಿ (ಯಲ್ಬುರ್ಗ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ನ್ಯಾಯಮೂರ್ತಿ ಶ್ರೀ ಓ. ಚಿನ್ನಪ್ಪರೆಡ್ಡಿರವರ ಆಯೋಗದ ವರದಿಯನ್ನು ಸರ್ಕಾರ ಅಂಗೀಕರಿಸಿದೆಯೇ;
ಆ) ಹಾಗಿದ್ದಲ್ಲಿ, ಈ ಆಯೋಗದ ಶಿಫಾರಸ್ಸುಗಳನ್ನು ಯಾವಾಗ ಜಾರಿಗೊಳಿಸಲಾಗುವುದು;
ಇ) ಈ ವರದಿಯನ್ನು ಅಂಗೀಕರಿಸದಿದ್ದಲ್ಲಿ ಸರ್ಕಾರವು ಯಾವ ಕ್ರಮಗಳನ್ನು ತೆಗೆದುಕೊಳ್ಳಲು ಯೋಜಿಸಿದೆ ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು) –

ಅ) ನ್ಯಾಯಮೂರ್ತಿ ಶ್ರೀ ಓ. ಚಿನ್ನಪ್ಪರೆಡ್ಡಿ ಆಯೋಗದ ವರದಿಯು ಇನ್ನೂ ಸಚಿವಸಂಪುಟ ಉಪ ಸಮಿತಿಯ ಪರಿಶೀಲನೆಯಲ್ಲಿದೆ.
ಆ) ಪ್ರಶ್ನೆ (ಅ) ದ ಉತ್ತರದಿಂದ ಇದು ಉದ್ಭವಿಸುವುದಿಲ್ಲ.
ಇ) ಪ್ರಶ್ನೆ (ಅ) ದ ಉತ್ತರದಿಂದ ಇದು ಉದ್ಭವಿಸುವುದಿಲ್ಲ.